ಸಾಕ್ಷಿಗೆ ದಿನಾಂಕಃ 28-07-2026 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ವಕೀಲರಿಂದಃ-**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ವಿಚಾರಗಳು ಸತ್ಯವಾಗಿರುತ್ತವೆ. ಅದಕ್ಕೆ ನಾನೇ ಮಾಹಿತಿ ಕೊಟ್ಟಿರುತ್ತೇನೆ. ಅದರಲ್ಲಿ ನಾನು ಸಹಿ ಮಾಡಿರುತ್ತೇನೆ.

ದಿ 15-06-2021 ರಂದು ಆಗಿರುವ ಆನ್ ಡಿಮ್ಯಾಂಡ್ ಪ್ರನೋಟ್ ಮತ್ತು ಹಣಸಂದಾಯ ರಶೀದಿಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ನಿಪಿ-1 ಮತ್ತು 2 ಎಂದು ಗುರುತಿಸಲಾಗಿದ್ದು, ಸಾಕ್ಷಿಯು ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಬಿ ಎಂದು ಗುರುತಿಸಲಾಗಿರುತ್ತದೆ, ಪ್ರತಿವಾದಿಗಳ ಸಹಿಗಳನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅವುಗಳನ್ನು ಈಗಾಗಲೇ ನಿಪಿ-1 ಎ ಮತ್ತು 2 ಎ ಎಂದು ಗುರುತಿಸಿದ್ದು, ಅದೇ ರೀತಿ ಮತ್ತೊಬ್ಬ ಸಾಕ್ಷಿದಾರರಾದ ಶಿವರುದ್ರ ರವರ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಸಿ ಎಂದು ಗುರುತಿಸಲಾಗಿರುತ್ತದೆ, ಪತ್ರ ಬರಹಗಾರರಾದ ವೆಂಕಟೇಶ್ ಕೆ.ಎನ್ ರವರ ಸಹಿ ನಿಪಿ-2 ಡಿ ಎಂದು ಈಗಾಗಲೇ ಗುರುತಿಸಲಾಗಿದೆ.

**ಪ್ರತಿವಾದಿಗಳು ಏಕಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸ ಇ

ಒಂದನೇ ಅಪರ ಸಿವಿಲ್ ನ್ಯಾಯಾಧೀಶರು,

ಮದ್ದೂರು